# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2016-17ನೇ ಸಾಲಿನಲ್ಲಿ ಸರ್ಕಾರಿ ಉರ್ದು ಶಾಲೆಗಳಿಗೆ 9 ಅಂಶಗಳ ಕಾರ್ಯಕ್ರಮ ಸೌಲಭ್ಯವನ್ನು ವಿಸ್ತರಿಸಲು ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:1** 2016-17ನೇ ಸಾಲಿನ ಆಯವ್ಯಯ ಭಾಷಣ.

2 ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಸಲ್ಲಿಸಿರುವ ಏಕಕಡತ ಪ್ರಸ್ತಾವನೆ ಸಂಖ್ಯೆ: ಅಸಂನಿ/ಸ.ಉ.ಶಾ/9 ಅಂಶ/ಸಿಆರ್-199/2016-17 ದಿ: 04.04.2016

>>>()<<<

**<u>ಪ್ರಸ್ತಾವನೆ</u>:-**

ಮೇಲೆ (1)ರಲ್ಲಿ ಓದಲಾದ 2016-17ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಯವರು ಆಯವ್ಯಯ ಭಾಷಣ ಕಂಡಿಕೆ-211ರಲ್ಲಿ ಸರ್ಕಾರಿ ಉರ್ದು ಶಾಲೆಗಳಿಗೆ 9 ಅಂಶಗಳ ಕಾರ್ಯಕ್ರಮ ಸೌಲಭ್ಯವನ್ನು ವಿಸ್ತರಿಸಲಾಗುವುದು ಎಂದು ಘೋಷಿಸಿರುತ್ತಾರೆ.

ಮೇಲೆ (2)ರಲ್ಲಿ ಓದಲಾದ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ರವರು ತಮ್ಮ ಪ್ರಸ್ತಾವನೆಯಲ್ಲಿ ರಾಜ್ಯದ ಶಿಕ್ಷಣ ಇಲಾಖೆಯಲ್ಲಿ ಒಟ್ಟು 4258 ಸರ್ಕಾರಿ ಉರ್ದು ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, 22,269 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಸದರಿ ಶಾಲೆಗಳಿಗೆ ಈಗಾಗಲೇ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಮೂಲಸೌಕರ್ಯ ಕಲ್ಪಿಸಲು ಸಹಕಾರ ನೀಡಲಾಗುತ್ತಿದೆ. ಸದರಿ ಶಾಲೆಗಳಿಗೆ ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ಹಾಗೂ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ರವರು ಭೇಟಿ ನೀಡಿರುವ ಸಂದರ್ಭದಲ್ಲಿ ಕೆಲವು ಶಾಲೆಗಳಲ್ಲಿ ಶಾಲೆಯ ಕಟ್ಟಡದ ಮೇಲ್ಚಾವಣಿ ಸೋರುತ್ತಿರುವುದರಿಂದ, ವಿದ್ಯಾರ್ಥಿಗಳಿಗೆ ಆರೋಗ್ಯದ ಸಮಸ್ಯೆ ಎದುರಿಸುತ್ತಿದ್ದು ಮತ್ತು ಈ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದಿರುವುದರಿಂದ ವಿದ್ಯಾರ್ಥಿಗಳು ಖಾಸಗಿ ಶಾಲೆಗಳ ಕಡೆ ಒಲವು ತೋರುತ್ತಿದ್ದಾರೆ ಎಂಬ ಅಂಶಗಳ ಬಗ್ಗೆ ಸರ್ಕಾರದ ಗಮನವನ್ನು ಸೆಳೆದಿರುತ್ತಾರೆ. ಈ ಎಲ್ಲಾ ಸೌಲಭ್ಯಗಳ ಕೊರತೆಯಿಂದಾಗಿ ವಿದ್ಯಾರ್ಥಿಗಳ ಸಂಖ್ಯಾಬಲ ಕಡಿಮೆಯಾಗುತ್ತಿದೆ. ಸರ್ಕಾರಿ ಉರ್ದು ಶಾಲೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಅಲ್ಪಸಂಖ್ಯಾತರು ವ್ಯಾಸಂಗ ಮಾಡುತ್ತಿದ್ದು ಮತ್ತು ಸರ್ಕಾರಿ ಉರ್ದು ಶಾಲೆಗಳಲ್ಲಿ ಶಿಕ್ಷಣ ಇಲಾಖೆ ರವರು ನೀಡುತ್ತಿರುವ ಸೌಲಭ್ಯಗಳಲ್ಲಿ ಕೊರತೆ ಇರುವುದರಿಂದ ಉರ್ದು ಶಾಲೆಗಳ ಬಗ್ಗೆ ಹೆಚ್ಚಿನ ಮನ್ನಣೆ/ಸಹಕಾರ ನೀಡಬೇಕಾಗುತ್ತದೆ.

ಮೂಲ ಸೌಕರ್ಯಗಳಾದ ಬೆಂಚ್ ಮತ್ತು ಡೆಸ್ಕ್, ವಿದ್ಯುತ್‌ಶಕ್ತಿ, ಕಂಪ್ಯೂಟರ್ ಸೌಲಭ್ಯ, ಲ್ಯಾಬ್, ಗ್ರಂಥಾಲಯ, ಪುಸ್ತಕಗಳು, ಆಟದ ಮೈದಾನ, ಕಾಂಪೌಂಡ್ ಗೋಡೆ, ಕ್ರೀಡಾ ಸಾಮಾಗ್ರಿ, ಶೌಚಾಲಯಗಳು, ಕುಡಿಯುವ ನೀರಿನ ಸೌಲಭ್ಯ ಅಸಮರ್ಪಕವಾಗಿರುವುದು ಕಂಡು ಬಂದಿದ್ದು, ಈ ಬಗ್ಗೆ ಪೋಷಕರು, ಸಂಘ ಸಂಸ್ಥೆ/ಸಮಾಜ ಸೇವಕರು/ಎನ್.ಜಿ.ಓ ರವರು ಶಾಲೆಗಳಲ್ಲಿ ಬೆಂಚ್ ಮತ್ತು ಡೆಸ್ಕ್‌ಗಳಿಲ್ಲದೇ ನೆಲದ ಮೇಲೆ ಕುಳಿತು ಪಾಠ ಕಲಿಯುತ್ತಿರುವ ಬಗ್ಗೆ ಸಕಾರದ ಗಮನ ಸೆಳೆದಿರುತ್ತಾರೆ. ಅಲ್ಲದೆ ಗಣಕಯಂತ್ರ/ಸ್ಮಾರ್ಟ್ ಕ್ಲಾಸ್ ಸಾಧನಗಳು, ಲೈಟು, ಫ್ಯಾನ್‌ಗಳಿಗೆ ವಿದ್ಯುತ್ ಸಂಪರ್ಕ ಇರುವುದಿಲ್ಲ. ಶಾಲೆಗಳಲ್ಲಿ ಗಣಕಯಂತ್ರ ಸೌಕರ್ಯ ಕೊರತೆ ಇರುವುದಾಗಿ ತಿಳಿಸಿರುತ್ತಾರೆ.

.....2

ಆದ್ದರಿಂದ, 2016-17ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯಂತೆ ಸರ್ಕಾರಿ ಉರ್ದು ಶಾಲೆಗಳಿಗೆ ಸೌಲಭ್ಯವನ್ನು ವಿಸ್ತರಿಸಲು ಈ ಕೆಳಕಂಡ 9 ಅಂಶಗಳ ಕಾರ್ಯಕ್ರಮ ಜಾರಿಗೊಳಿಸಲು ಹಾಗೂ SSLC & PUC ಯಲ್ಲಿ ಅತಿಹೆಚ್ಚು ಅಂಕಗಳಿಸುವ 500 ವಿದ್ಯಾರ್ಥಿಗಳಿಗೆ ಕ್ರಮವಾಗಿ ತಲಾ 10,000 ಮತ್ತು 20,000ಗಳ ಮುಖ್ಯ ಮಂತ್ರಿಯವರ ಪ್ರೋತ್ಸಾಹ ಬಹುಮಾನವನ್ನು ನೀಡಲು ಸರ್ಕಾರದ ಮಂಜೂರಾತಿ ಕೋರಿ ಏಕಕಡತ ಪದ್ಧತಿಯಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

1. **ವಿದ್ಯಾರ್ಥಿಗಳಿಗೆ ಬೆಂಚ್ ಮತ್ತು ಡೆಸ್ಕ್‌ಗಳನ್ನು ಒದಗಿಸುವುದು,**
2. **ವಿದ್ಯುತ್ ಶಕ್ತಿ ಸಂಪರ್ಕ ಕಲ್ಪಿಸುವುದು,**
3. **ಕಂಪ್ಯೂಟರ್ ಸೌಲಭ್ಯ ಒದಗಿಸುವುದು,**
4. **ವಿಜ್ಞಾನ ಪ್ರಯೋಗಾಲಯ ಸೌಲಭ್ಯ ಒದಗಿಸುವುದು,**
5. **ಗ್ರಂಥಾಲಯ ಸೌಲಭ್ಯ ಒದಗಿಸುವುದು,**
6. **ಆಟದ ಮೈದಾನ ಮತ್ತು ಕಾಂಪೌಂಡ್ ಗೋಡೆ ನಿರ್ಮಾಣ ಮಾಡುವುದು,**
7. **ಕ್ರೀಡಾ ಸಾಮಾಗ್ರಿಗಳನ್ನು ಒದಗಿಸುವುದು,**
8. **ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು,**
9. **ಗಂಡು ಮಕ್ಕಳಿಗೆ ಹಾಗೂ ಹೆಣ್ಣುಮಕ್ಕಳಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಕಲ್ಪಿಸುವುದು,**

ಮೇಲ್ಕಂಡ 9 ಅಂಶಗಳ ಕಾರ್ಯಕ್ರಮವನ್ನು ಜಾರಿಗೊಳಿಸುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ, ದೈಹಿಕ, ಭೌದ್ಧಿಕ ಚಟುವಟಿಕೆಗಳಿಗೆ ಒತ್ತು ನೀಡಿದಂತಾಗುತ್ತಿದೆ. ಹಾಗೂ ಮೂಲಭೂತ ಸೌಲಭ್ಯಕ್ಕೆ ಕೊರತೆಯನ್ನು ಎದುರಿಸುತ್ತಿರುವ ಶಾಲೆಗಳಿಗೆ ಮೂಲಭೂತ ಸೌಲಭ್ಯಗಳನ್ನು ನೀಡಿದಂತಾಗುತ್ತದೆ. ಈ ಕಾರ್ಯಕ್ರಮಗಳ ಅನುಷ್ಠಾನದಿಂದ ಶಾಲೆಗಳನ್ನು ಆಧುನೀಕರಣದ ಶಿಕ್ಷಣದತ್ತ ಕೊಂಡಯ್ಯಲು ಸಹಕಾರಿಯಾಗುವುದರಿಂದ ಹಾಗೂ ಮುಖ್ಯಮಂತ್ರಿಯವರು ಪ್ರೋತ್ಸಾಹ ಬಹುಮಾನವನ್ನು ನೀಡುವುದರಿಂದ ವಿದ್ಯಾರ್ಥಿಗಳು ಹೆಚ್ಚು ಅಂಕ ಗಳಿಸುವಲ್ಲಿ ಆಕರ್ಷಿಸುವುದರಿಂದ ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:MWD 141 MDS 2016, ಬೆಂಗಳೂರು, ದಿನಾಂಕ:04-10-2016**

ಮೇಲೆ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಸರ್ಕಾರಿ ಉರ್ದು ಪ್ರಾಥಮಿಕ/ಪ್ರೌಢಶಾಲೆಗಳಿಗೆ ಈ ಕೆಳಕಂಡಂತೆ ಉದ್ದೇಶಿಸಿರುವ 09 ಅಂಶಗಳ ಕಾರ್ಯಕ್ರಮ ಸೌಲಭ್ಯವನ್ನು ವಿಸ್ತರಿಸಲು ಹಾಗೂ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸುವ 250 ವಿದ್ಯಾರ್ಥಿಗಳಿಗೆ ತಲಾ 10,000/- ಹಾಗೂ ದ್ವಿತೀಯ ಪಿ.ಯು.ಸಿಯಲ್ಲಿ ಹೆಚ್ಚು ಅಂಕಗಳಿಸುವ 250 ವಿದ್ಯಾರ್ಥಿಗಳಿಗೆ ತಲಾ 20,000/- ರೂಗಳ ಮಾನ್ಯ ಮುಖ್ಯಮಂತ್ರಿಯವರ ಪ್ರೋತ್ಸಾಹ ಬಹುಮಾನ ನೀಡಲು ಈ ಕೆಳಕಂಡ ಷರತ್ತುಗಳೊಂದಿಗೆ ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಿದೆ.

**ಯೋಜನೆಗಳು:-**

1. ವಿದ್ಯಾರ್ಥಿಗಳಿಗೆ ಬೆಂಚ್ ಮತ್ತು ಡೆಸ್ಕ್‌ಗಳನ್ನು ಒದಗಿಸುವುದು.
2. ವಿದ್ಯುತ್ ಶಕ್ತಿ ಸಂಪರ್ಕ ಕಲ್ಪಿಸುವುದು.
3. ಕಂಪ್ಯೂಟರ್ ಸೌಲಭ್ಯ ಒದಗಿಸುವುದು.
4. ವಿಜ್ಞಾನ ಪ್ರಯೋಗಾಲಯ ಸೌಲಭ್ಯ ಒದಗಿಸುವುದು.
5. ಗ್ರಂಥಾಲಯ ಸೌಲಭ್ಯ ಒದಗಿಸುವುದು.
6. ಆಟದ ಮೈದಾನ ಮತ್ತು ಕಾಂಪೌಂಡ್ ಗೋಡೆ ನಿರ್ಮಾಣ ಮಾಡುವುದು
7. ಕ್ರೀಡಾ ಸಾಮಾಗ್ರಿಗಳನ್ನು ಒದಗಿಸುವುದು.
8. ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.
9. ಗಂಡು ಮಕ್ಕಳಿಗೆ ಹಾಗೂ ಹೆಣ್ಣುಮಕ್ಕಳಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಕಲ್ಪಿಸುವುದು.

......3